# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ವಿಆ(ಘ.ತ್ಯಾ.ನಿ)/ಪಿಆರ್/ 11 /2015-16

ವಿಶೇಷ ಆಯುಕ್ತರು (ಘ.ತ್ಯಾ.ನಿ/ಆ)ರವರ ಕಛೇರಿ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು, ದಿನಾಂಕ:18.04.2016.

## :: ಕಛೇರಿ ಆದೇಶ ::

ವಿಷಯ: ಒಣತ್ಯಾಜ್ಯ ಸಂಗ್ರಹಣಾ ಕೇಂದ್ರ **(DWCC)** ದಲ್ಲಿ ಸಂಗ್ರಹವಾಗುವ ಒಣತ್ಯಾಜ್ಯ ಕುರಿತು ಪ್ರತಿ ದಿನ ಮಾಹಿತಿ ನೀಡುವ ಬಗ್ಗೆ.

ಉಲ್ಲೇಖ: ದಿನಾಂಕ:20.01.2016 ರಂದು ನೀಡಿರುವ ನಮೂನೆ-7 ರಂತೆ

*****

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿ ನಿತ್ಯ ಅಂದಾಜು 3500 ಟನ್ ಘನತ್ಯಾಜ್ಯ ಉತ್ಪತ್ತಿಯಾಗುತ್ತಿದ್ದು, ಸದರಿ ಘನತ್ಯಾಜ್ಯಗಳ ಸಂಗ್ರಹಣೆ, ಬೀದಿ ಗುಡಿಸುವಿಕೆ, ಸಾಗಣಿಕೆ, ಸಂಸ್ಕರಣೆ ಮತ್ತು ವಿಲೇವಾರಿಯನ್ನು ಪಾಲಿಕೆವತಿಯಿಂದ ನಿರ್ವಹಿಸಲಾಗುತ್ತಿದ್ದು, ಘನತ್ಯಾಜ್ಯ ವಸ್ತುಗಳನ್ನು ಉತ್ಪಾದನೆ ಹಂತದಲ್ಲಿಯೇ ವಿಂಗಡಣೆ ಮಾಡಲು ಪ್ರೋತ್ಸಾಹಿಸುವ ಸಲುವಾಗಿ 189 ಒಣತ್ಯಾಜ್ಯ ಸಂಗ್ರಹಣಾ ಕೇಂದ್ರಗಳನ್ನು ಪಾಲಿಕೆ ವ್ಯಾಪ್ತಿಯ ವಾರ್ಡ್‌ಗಳಲ್ಲಿ ಸ್ಥಾಪಿಸಲಾಗಿರುತ್ತದೆ. ಸದರಿ ಕೇಂದ್ರಗಳಲ್ಲಿ ವಾರ್ಡ್‌ನಲ್ಲಿ ಉತ್ಪತ್ತಿಯಾಗುವ ಕೇವಲ ಒಣತ್ಯಾಜ್ಯ ವಸ್ತುಗಳನ್ನು ಮಾತ್ರ ಸಂಗ್ರಹಣೆ ಮಾಡಲಾಗುತ್ತಿದೆ.

ಉಲ್ಲೇಖದಲ್ಲಿ ತಿಳಿಸಿರುವಂತೆ ದಿನಾಂಕ:20.01.2016ರ ನಮೂನೆ-7 ರಂತೆ ಪ್ರತಿದಿನ ಘನತ್ಯಾಜ್ಯ ಸಂಗ್ರಹಣಾ ಕೇಂದ್ರದಿಂದ ವರದಿಯನ್ನು ಸಂಗ್ರಹಿಸಿ ನೀಡಲು ಸೂಚನೆ ನೀಡಲಾಗಿತ್ತು. ಈ ಹಿನ್ನಲೆಯಲ್ಲಿ ವಾರ್ಡಿನಲ್ಲಿ ಕಾರ್ಯನಿರ್ವಹಿಸುವ ಕಿರಿಯ/ಸಹಾಯಕ ಅಭಿಯಂತರರು ಮತ್ತು ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ಪ್ರತಿದಿನ ಒಣತ್ಯಾಜ್ಯ ಸಂಗ್ರಹಣಾ ಕೇಂದ್ರವನ್ನು ಕಡ್ಡಾಯವಾಗಿ ಭೇಟಿ ಮಾಡಿ ಆಯಾ ವಾರ್ಡಿನಿಂದ ಒಣತ್ಯಾಜ್ಯ ಸಂಗಹ್ರಣೆ ಕೇಂದ್ರದಲ್ಲಿ ಸಂಗ್ರಹಣೆಯಾಗುವ ಒಣತ್ಯಾಜ್ಯ ವಸ್ತುಗಳನ್ನು ಈ ಪತ್ರದೊಂದಿಗೆ ಲಗತ್ತಿಸಿರುವ ನಮೂನೆಯಲ್ಲಿ ಭರ್ತಿ ಮಾಡಿ ಪ್ರತಿ ನಿತ್ಯ **Whats app** ಹಾಗೂ **e-mail** ಮೂಲಕ ಸಲ್ಲಿಸಲು ಸೂಚಿಸಿದೆ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಆರೋಗ್ಯ ವೈದ್ಯಾಧಿಕಾರಿಗಳು ಆಗಿಂದಾಗ್ಗೆ ಭೇಟಿ ಮಾಡಿ ಪರಿಶೀಲನೆ ನಡೆಸುವುದು.

ಸದರಿ ಮಾಹಿತಿಯನ್ನು ಪಡೆಯಲು ಎಲ್ಲಾ ವಲಯಗಳಲ್ಲಿ ವಾರ್ಡಿನ ಕಿರಿಯ/ಸಹಾಯಕ ಅಭಿಯಂತರರೊಳಗೊಂಡಂತೆ **DWCC Whats app group** ಪ್ರಾರಂಭಿಸಿ ಅಧೀಕ್ಷಕ ಅಭಿಯಂತರರ ತಾಂತ್ರಿಕ ಸಹಾಯಕರಿಂದ ಗ್ರೂಪ್ ರಚನೆ ಮಾಡಿ ಮಾಹಿತಿ ಪಡೆಯಲು ಸೂಚಿಸುತ್ತಾ, ಸದರಿ

ತಾಂತ್ರಿಕ ಸಹಾಯಕರು ಪ್ರತಿನಿತ್ಯ ಮಾಹಿತಿ ಸಂಗ್ರಹಿಸಿ **SWM core group** ನಲ್ಲಿ ಮಾಹಿತಿ ನೀಡಲು ತಾಂತ್ರಿಕ ಸಹಾಯಕರಿಗೆ ಸೂಚನೆ ನೀಡಲು ಈ ಮೂಲಕ ಎಲ್ಲಾ ವಲಯದ ಅಪರ/ಜಂಟಿ ಆಯುಕ್ತರವರಿಗೆ ಸೂಚಿಸಿದೆ.

18.4.16

ವಿಶೇಷ ಆಯುಕ್ತರು (ಘ.ತ್ಯಾ.ನಿ.)
ಬಿಬಿಎಂಪಿ

<u>ಪ್ರತಿಯನ್ನು:</u>

1) ಪೂಜ್ಯ ಮಹಾಪೌರರ ಆದ್ಯ ಗಮನಕ್ಕೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2) ಉಪ ಮಹಾಪೌರರ ಆದ್ಯ ಗಮನಕ್ಕೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3) ಮಾನ್ಯ ಆಯುಕ್ತರು, ಗಮನಕ್ಕೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
4) ಅಧ್ಯಕ್ಷರು ಆರೋಗ್ಯ ಸ್ಥಾಯಿ ಸಮಿತಿ ರವರ ಗಮನಕ್ಕೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
5) ಪ್ರಧಾನ ಅಭಿಯಂತರರು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
6) ಜಂಟಿ ಆಯುಕ್ತರು (ಆರೋಗ್ಯ ಮತ್ತು ಘನತ್ಯಾಜ್ಯ ನಿರ್ವಹಣೆ) ರವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
7) ಎಲ್ಲಾ ವಲಯ ಅಪರ/ಜಂಟಿ ಆಯುಕ್ತರುಗಳಿಗೆ ಮುಂದಿನ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
8) ಎಲ್ಲಾ ವಲಯ ಮುಖ್ಯ ಅಭಿಯಂತರರುಗಳಿಗೆ ಮುಂದಿನ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
9) ಎಲ್ಲಾ ವಲಯ ಅಧೀಕ್ಷಕ ಅಭಿಯಂತರರುಗಳಿಗೆ ಮುಂದಿನ ಅಗತ್ಯಕ್ರಮಕ್ಕಾಗಿ ಕಳುಹಿಸಿದೆ.
10) ಸಂಬಂಧಪಟ್ಟ ಅಧಿಕಾರಿಗಳಿಗೆ ಕಳುಹಿಸುತ್ತಾ, ಮೇಲೆ ಸೂಚಿಸಿರುವಂತೆ ಅಗತ್ಯ ಕ್ರಮವಹಿಸುವುದು.
11) ಕಛೇರಿ ಕಡತಕ್ಕೆ.

# Daily Dry Waste Collection Centers Report

**Name of the Zone :** **Date:**

| Sl No. | Ward No. | Dry Waste Received per day (Kg) | Dry Waste Segregated per day (Kg) | Dry Waste Disposed in tons (daily) in kg | Rejects left (daily) in kg | Remarks |
|---|---|---|---|---|---|---|
| 1 | | | | | | |
| 2 | | | | | | |
| 3 | | | | | | |
| 4 | | | | | | |
| 5 | | | | | | |
| | **Total** | | | | | |

ಅಪರ/ಜಂಟಿ ಆಯುಕ್ತರು
ಬಿಬಿಎಂಪಿ